# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 181 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ರಘುನಾಥ್ ರಾವ್ ಮಲ್ಕಾಪುರ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 03.03.2020 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಬಡವರ ಹಸಿವು ನೀಗಿಸಲು ಅನ್ನಭಾಗ್ಯ ಯೋಜನೆಯಡಿ ಸರ್ಕಾರ ವಿತರಿಸುತ್ತಿರುವ ಅಪಾರ ಪ್ರಮಾಣದ ಅಕ್ಕಿ ಮಧ್ಯವರ್ತಿಗಳ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಆ | ಹಾಗಿದ್ದಲ್ಲಿ, ಈ ಅನ್ನಭಾಗ್ಯ ಯೋಜನೆಯಡಿ ಬಿ.ಪಿ.ಎಲ್-ಎ.ಪಿ.ಎಲ್ ಹಾಗೂ ಅಂತ್ಯೋದಯ ಕಾರ್ಡುದಾರರಿಗೆ ವಿತರಿಸುವ ಅಕ್ಕಿಯಲ್ಲಿ ಸಾವಿರಾರು ಟನ್ ಗಟ್ಟಲೆ ಉಳಿಕೆಯಾಗುತ್ತಿದ್ದು ಕೆಲ ಅಧಿಕಾರಿ/ನೌಕರರ ಹಾಗೂ ನ್ಯಾಯಬೆಲೆ ಅಂಗಡಿ ಮಾಲೀಕರು ಸರ್ಕಾರಕ್ಕೆ ತಪ್ಪು ಲೆಕ್ಕ ತೋರಿಸಿ ಈ ಅಕ್ಕಿಯನ್ನು ಕಬಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅನ್ನಭಾಗ್ಯ ಅಕ್ಕಿಯ ದುರುಪಯೋಗಕ್ಕೆ ಸಂಬಂಧಿಸಿದಂತೆ ಈ ಸಾಲಿನಲ್ಲಿ ಒಟ್ಟು 209 ಪ್ರಕರಣಗಳನ್ನು ದಾಖಲಿಸಲಾಗಿದೆ. 41 ನ್ಯಾಯಬೆಲೆ ಅಂಗಡಿಗಳನ್ನು ರದ್ದುಪಡಿಸಲಾಗಿದೆ, 168 ನ್ಯಾಯಬೆಲೆ ಅಂಗಡಿಗಳನ್ನು ಅಮಾನತ್ತು ಪಡಿಸಲಾಗಿದ್ದು, ವಿಚಾರಣೆ ಜಾರಿಯಲ್ಲಿರುತ್ತದೆ. |
| ಇ | ಈ ಅಕ್ರಮವನ್ನು ತಪ್ಪಿಸಲು ಹಾಗೂ ಬಡವರಿಗೆ ಈ ಯೋಜನೆಯನ್ನು ಸಂಪೂರ್ಣವಾಗಿ ತಲುಪುವಂತೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ರಾಜ್ಯದ ಸಾರ್ವಜನಿಕ ವಿತರಣಾ ಪದ್ಧತಿಯಡಿ ವಿತರಿಸುತ್ತಿರುವ ಪಡಿತರ ಪದಾರ್ಥಗಳು ಸಂಪೂರ್ಣವಾಗಿ ಫಲಾನುಭವಿಗಳಿಗೆ ತಲುಪಿಸಲು ಈ ಕೆಳಕಂಡ ಸುಧಾರಣೆಗಳನ್ನು ಜಾರಿಗೆ ತರಲಾಗಿದೆ.<br>1. ರಾಜ್ಯದ ಎಲ್ಲಾ ಪಡಿತರ ಚೀಟಿಗಳನ್ನು ಫಲಾನುಭವಿಗಳ ಆಧಾರ್ ನೊಂದಿಗೆ ಜೋಡಣೆ ಮಾಡಲಾಗಿದೆ. ಪ್ರತಿ ತಿಂಗಳು ಬಯೋಮೆಟ್ರಿಕ್ ವ್ಯವಸ್ಥೆಯ ಮುಖಾಂತರ ಫಲಾನುಭವಿಗಳಿಗೆ ಆಹಾರ ಧಾನ್ಯವನ್ನು ವಿತರಿಸಲಾಗುತ್ತಿದೆ.<br>2. ನ್ಯಾಯಬೆಲೆ ಅಂಗಡಿಗಳ ಬಿಲ್ಲಿಂಗ್ ವ್ಯವಸ್ಥೆಯನ್ನು ಗಣಕೀಕರಣಗೊಳಿಸಿ ಆನ್ ಲೈನ್ ವ್ಯವಸ್ಥೆಯನ್ನು ಜಾರಿ ಮಾಡಲಾಗಿದೆ. |

| | | |
|---|---|---|
| | | 3. ಪಡಿತರ ಫಲಾನುಭವಿಗಳ ಕುಂದುಕೊರತೆಗಳ ನಿವಾರಣೆಗೆ ಸಂಬಂಧಿಸಿದಂತೆ ಆಹಾರ ಅದಾಲತ್, ಜಾಗೃತ ಸಮಿತಿಗಳು, ಸಹಾಯವಾಣಿ, ಹಂಚಿಕೆ ಬಗ್ಗೆ ಪಡಿತರ ಚೀಟಿದಾರರಿಗೆ ಎಸ್.ಎಂ.ಎಸ್ ರವಾನೆ ಇತ್ಯಾದಿ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>ಮೇಲಿನ ಸುಧಾರಣೆಗಳಂತೆ ನ್ಯಾಯಬೆಲೆ ಅಂಗಡಿಗಳಲ್ಲಿ ಪಿ.ಓ.ಎಸ್ ವ್ಯವಸ್ಥೆಯಲ್ಲಿ ಪಡಿತರ ಚೀಟಿದಾರರಗೆ ಆಧಾರ್ ಬಯೋಮೆಟ್ರಿಕ್ ಮುಖಾಂತರ ವಿತರಣೆ ಮಾಡಲಾಗುತ್ತಿದ್ದು, ಅಂಗಡಿ ಮಾಲೀಕರು ಸರ್ಕಾರಕ್ಕೆ ತಪ್ಪು ಲೆಕ್ಕವನ್ನು ತೋರಿಸಲು ಅವಕಾಶವಿರುವುದಿಲ್ಲ. ಹಾಗೂ ಅಂಗಡಿಯಲ್ಲಿ ಉಳಿಕೆಯಾಗುವ ಪದಾರ್ಥವನ್ನು ಲೆಕ್ಕಕ್ಕೆ ತೆಗೆದುಕೊಂಡು ಮುಂದಿನ ಮಾಹೆಯ ಅಂಗಡಿ ಹಂಚಿಕೆಯಲ್ಲಿ ಆರಂಭಿಕ ದಾಸ್ತಾನಾಗಿ ಕಡಿತಗೊಳಿಸಲಾಗುತ್ತದೆ. |
| ಈ | ಸುಳ್ಳು ಲೆಕ್ಕ ತೋರಿಸಿ ಕಾಳಸಂತೆಯಲ್ಲಿ ಅನ್ನಭಾಗ್ಯ ಅಕ್ಕಿಯನ್ನು ಮಾರಾಟ ಮಾಡುವ ಅಧಿಕಾರಿ/ಅಂಗಡಿ ಮಾಲೀಕರು ಹಾಗೂ ಮಧ್ಯವರ್ತಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು? (ಸ್ಪಷ್ಟ ಮಾಹಿತಿ ಒದಗಿಸುವುದು) | ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಪಡಿತರ ದುರುಪಯೋಗ ಪ್ರಕರಣಗಳಿಗೆ ಸಂಬಂಧಿಸಿದಂತೆ ಈ ಸಾಲಿನಲ್ಲಿ ಒಟ್ಟು 209 ಪ್ರಕರಣಗಳನ್ನು ದಾಖಲಿಸಲಾಗಿದೆ. 41 ನ್ಯಾಯಬೆಲೆ ಅಂಗಡಿಗಳನ್ನು ರದ್ದುಪಡಿಸಲಾಗಿದೆ, 168 ಅಮಾನತ್ತು ಪಡಿಸಿ, ವಿಚಾರಣೆ ಜಾರಿಯಲ್ಲಿರುತ್ತದೆ.<br>ಇದಲ್ಲದೆ ಅಗತ್ಯ ವಸ್ತುಗಳ ಕಾಯ್ದೆಯಡಿ ರಾಜ್ಯದಲ್ಲಿ 191 ಪ್ರಕರಣಗಳನ್ನು ದಾಖಲಿಸಿದ್ದು, 2602.97 ಕ್ವಿಂಟಾಲ್. ಅಕ್ಕಿ 37.71 ಗೋಧಿಯನ್ನು ವಶಪಡಿಸಿಕೊಳ್ಳಲಾಗಿದೆ. |

**ಆನಾಸ 46 ಡಿಆರ್ ಎ 2020 (ಇ-ಆಫೀಸ್)**

(ಕೆ.ಗೋಪಾಲಯ್ಯ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.